**Akashvani : Bangalore**
**Regional Bulletin In Kannada**
**02.07.2026 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಮಳೆ ಆಧಾರಿತ ಬೆಳೆ ಬೆಳೆಯದಂತೆ ರೈತರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ

೨. ರಾಜ್ಯದಲ್ಲಿ ಬರಪರಿಸ್ಥಿತಿ; ಬೆಳೆಹಾನಿಯ ವೈಜ್ಞಾನಿಕ ಸಮೀಕ್ಷೆ ನಡೆಸುವಂತೆ ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ ಪತ್ರ

೩. ಸರ್ಕಾರದಿಂದ ಗ್ರಾಮೀಣ ಕುಡಿಯುವ ನೀರಿಗೆ ೧೧೭ ಕೋಟಿ ರೂಪಾಯಿ ಬಿಡುಗಡೆ

೪. ಪೊಲೀಸ್ ಇಲಾಖೆಯ ಮಾಹಿತಿ ಹಂಚಿಕೆಗೆ ಏಕೀಕೃತ ಮಾರ್ಗಸೂಚಿ - ಗೃಹ ಸಚಿವ ಪ್ರಿಯಾಂಕ್ ಖರ್ಗೆ

೫. ಗ್ಯಾರಂಟಿ ಯೋಜನೆ ಕಡಿತಗೊಳಿಸುವ ಭೀತಿ ನೆಪವೊಡ್ಡಿ ಎಸ್‌ಐಆರ್ ದುರ್ಬಳಕೆ - ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ

---

ಜಿಲ್ಲಾ ಉಸ್ತುವಾರಿ ಸಚಿವರು ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಪ್ರಜಾಸೇವೆ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ನಡೆದ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಎಲ್ಲಾ ಸಚಿವರು ಕ್ಷೇತ್ರಗಳಿಗೆ ತೆರಳಿ, ಶಾಸಕರ ಜೊತೆ ಜನರ ಸಮಸ್ಯೆ ಆಲಿಸಬೇಕು ಎಂದು ಹೇಳಿದ್ದಾರೆ.

ಇದೇ ವೇಳೆ ರಾಜ್ಯದ ಅಣೆಕಟ್ಟುಗಳಲ್ಲಿ ನೀರಿನ ಕೊರತೆ ಎದುರಾಗಿದ್ದು, ರೈತರು ಮಳೆ ಆಧಾರಿತ ಬೆಳೆ ಬೆಳೆಯದಂತೆ ಮನವಿ ಮಾಡಿದ್ದಾರೆ.

ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆಯ ಬಳಿಕೆ ಅಧಿವೇಶನ ಕರೆಯಲು ತೀರ್ಮಾನಿಸಲಾಗಿದೆ ಎಂದು ಹೇಳಿದ್ದಾರೆ. ಕಲ್ಯಾಣ ಮಂಟಪಗಳಲ್ಲಿ ಎಸ್‌ಐಆರ್ ಫಾರಂ ತುಂಬಲು ಅವಕಾಶವಿಲ್ಲ. ಬಿಎಲ್‌ಒಗಳೇ ಅರ್ಜಿಯನ್ನು ಹಂಚಬೇಕು ಎಂದು ಸೂಚನೆ ನೀಡಿದ್ದಾರೆ.

---

ರಾಜ್ಯದಲ್ಲಿ ಬರಪರಿಸ್ಥಿತಿ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ತಕ್ಷಣವೇ ಮುನ್ನೆಚ್ಚರಿಕೆ ಮತ್ತು ಪರಿಹಾರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಆರ್. ಅಶೋಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಪತ್ರದಲ್ಲಿ ಅರ್ಹ ತಾಲೂಕುಗಳನ್ನು ವಿಳಂಬವಿಲ್ಲದೆ, ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು. ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆಗೆ ಅಗತ್ಯ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ತಿಳಿಸಿದ್ದಾರೆ.

ಗ್ರಾಮೀಣ ಭಾಗದಲ್ಲಿ ಉದ್ಯೋಗ ಖಾತರಿ ಯೋಜನೆಗಳನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿ, ಕೃಷಿ ಕಾರ್ಮಿಕರ ವಲಸೆಯನ್ನು ತಡೆಯಬೇಕು ಎಂದು ಒತ್ತಾಯಿಸಿದ್ದಾರೆ.

ಬೆಳೆಹಾನಿಯ ವೈಜ್ಞಾನಿಕ ಸಮೀಕ್ಷೆ ನಡೆಸಿ, ರೈತರಿಗೆ ಮಧ್ಯಂತರ ಪರಿಹಾರ ಹಾಗೂ ಬೆಳೆ ವಿಮೆ ಸೌಲಭ್ಯವನ್ನು ಶೀಘ್ರವಾಗಿ ಒದಗಿಸಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

---

ರಾಜ್ಯದಲ್ಲಿ ಎಲ್ ನಿ ನೋ ಪ್ರಭಾವದಿಂದ ಮಳೆ ಕೊರತೆಯಾಗಿದ್ದು, ಗ್ರಾಮೀಣ ಕುಡಿಯುವ ನೀರಿಗೆ ಸರ್ಕಾರ ೧೧೭ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಬಿ. ಖಂಡ್ರೆ, ನೀರು ಪೂರೈಕೆಗೆ ಹಣದ ಕೊರತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈಗಾಗಲೇ ಸುಮಾರು ೮೫ ಕೋಟಿ ರೂಪಾಯಿಗಳ ಕ್ರಿಯಾ ಯೋಜನೆ ರೂಪಿಸಲಾಗಿದ್ದು, ೩೦ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ನೀರಿನ ಸಮಸ್ಯೆ ಇರುವ ಭಾಗಗಳಲ್ಲಿ ಕುಡಿಯುವ ನೀರು ಪೂರೈಕೆಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಸಂಕಷ್ಟದ ಸಮಯದಲ್ಲಿ ಜನರು ನೀರನ್ನು ಹಿತಮಿತವಾಗಿ ಬಳಸಿ, ಪೋಲು ಮಾಡದಂತೆ ಮನವಿ ಮಾಡಿದ್ದಾರೆ. ಪಂಚಾಯಿತಿಗಳು ನೀರು ಸೋರಿಕೆಯಾಗದಂತೆ ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

---

ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಮಾಹಿತಿ ಹಂಚಿಕೆಗೆ ಏಕೀಕೃತ ಮಾರ್ಗಸೂಚಿ ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ರಾಜ್ಯದ ಪೊಲೀಸ್ ಠಾಣೆಗಳು, ಜಿಲ್ಲಾ ಪೊಲೀಸ್ ಕಚೇರಿಗಳು, ನಗರ ಪೊಲೀಸ್ ಆಯುಕ್ತಾಲಯಗಳು ಹಾಗೂ ವಿಶೇಷ ಘಟಕಗಳು ಮಾಧ್ಯಮಗಳಿಗೆ ಮಾಹಿತಿ ನೀಡುವ ಸಂದರ್ಭದಲ್ಲಿ ಏಕೀಕೃತ ವಿಧಾನ ಅನುಸರಿಸಲು ನಿರ್ಧರಿಸಲಾಗಿದೆ. ಇದರಿಂದ ತಪ್ಪು ಮಾಹಿತಿ ಹರಡುವುದನ್ನು ತಡೆಯುವ ಜೊತೆಗೆ ತನಿಖೆಯ ಗೌಪ್ಯತೆ ಕಾಪಾಡಲು ಸಹಾಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಅಪರಾಧ ಪ್ರಕರಣಗಳ ತನಿಖೆ, ಗುಪ್ತಚರ ಮಾಹಿತಿ, ಸೈಬರ್ ಅಪರಾಧಗಳು, ಸಂಘಟಿತ ಅಪರಾಧ ಚಟುವಟಿಕೆಗಳು ಹಾಗೂ ಕಾನೂನು ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಯನ್ನು ಅನುಮತಿ ಇಲ್ಲದೆ ಬಹಿರಂಗಪಡಿಸದಂತೆ ಸೂಚನೆ ನೀಡಲಾಗಿದೆ.

ಯಾವುದೇ ತನಿಖೆಯ ಗೌಪ್ಯತೆ ಮತ್ತು ನ್ಯಾಯಾಂಗ ಪ್ರಕ್ರಿಯೆಗಳ ಶುದ್ಧತೆಯನ್ನು ಕಾಪಾಡುವುದು ಸರ್ಕಾರದ ಸ್ಪಷ್ಟ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

---

ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದಲ್ಲಿ ನಡೆದ ದುರಂತಕ್ಕೆ ಕ್ವಾರಿ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಗೆಯುವ ಯಂತ್ರವು ಮೇಲಿನಿಂದ ಬಂಡೆಯನ್ನು ತಳ್ಳಿದ್ದು, ಕಾರಣ ಎಂದು ಕೇಂದ್ರ ವಲಯ ಐಜಿಪಿ ಎಸ್. ಗಿರೀಶ್ ಸ್ಪಷ್ಟಪಡಿಸಿದ್ದಾರೆ.

ದುರಂತ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಥಳದಲ್ಲಿ ಎರಡು ಕ್ವಾರಿಗಳಿದ್ದು, ಮೇಲಿನ ಕ್ವಾರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಯಂತ್ರ ತಳ್ಳಿದ ಬಂಡೆಯು ಕೆಳಗಿನ ಕ್ವಾರಿಯಲ್ಲಿದ್ದ ಕಾರ್ಮಿಕರ ಮೇಲೆ ಬಿದ್ದು, ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ.

ಒಟ್ಟು ೧೨ ಕಾರ್ಮಿಕರು ಕ್ವಾರಿಯಲ್ಲಿದ್ದು, ಏಳು ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಈ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ತೆರಳಿ, ದುರಂತದಲ್ಲಿ ಗಾಯಗೊಂಡ ಗಾಯಾಳುಗಳ ಆರೋಗ್ಯ ವಿಚಾರಿಸಿದ್ದಾರೆ.

---

ಬೆಂಗಳೂರಿನ ಜಿಬಿಎ ವ್ಯಾಪ್ತಿಯಲ್ಲಿ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸುವುದಿಲ್ಲ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟಪಡಿಸಿದ್ದಾರೆ.

ಒತ್ತುವರಿ ತೆರವು ಕಾರ್ಯಾಚರಣೆ ಕುರಿತು ಸಂಬಂಧಿತ ಅಧಿಕಾರಿಗಳ ಜೊತೆ ನಡೆದ ವರ್ಚುವಲ್ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಆರ್ಟೆರಿಯಲ್ ಹಾಗೂ ಸಬ್ ಆರ್ಟೆರಿಯಲ್ ರಸ್ತೆಗಳಿಂದ ವಾರ್ಡ್ ರಸ್ತೆಗಳಿಗೆ ಸ್ಥಳಾಂತರಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದಾರೆ.

ನಗರದಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆಗೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಪಾದಚಾರಿಗಳಿಗೆ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಉತ್ತಮ ಗುಣಮಟ್ಟದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಬೇಕೆಂದು ಸೂಚಿಸಿದ್ದಾರೆ.

---

ರಾಮನಗರದಲ್ಲಿ ನಡೆದ ಎಸ್ಐಆರ್ ಅಭಿಯಾನದ ವೇಳೆ ಚುನಾವಣಾ ಆಯೋಗದ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮತದಾರರ ಪಟ್ಟಿಯಲ್ಲಿ ಬಾಂಗ್ಲಾ ವಲಸಿಗರಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳನ್ನು ಕಡಿತಗೊಳಿಸುವ ಕತ್ತರಿ ಹಾಕುವ ಭೀತಿ ಸೃಷ್ಟಿಸಿ, ಎಸ್ಐಆರ್ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ದೂರಿದ್ದಾರೆ. ರಾಮನಗರದಲ್ಲಿ ಸಾವಿರಾರು ಜನರನ್ನು ಕಲ್ಯಾಣ ಮಂಟಪದಲ್ಲಿ ಕೂರಿಸಿ, ಎಸ್ಐಆರ್ ನಡೆಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

---

ರಾಜ್ಯದಲ್ಲಿ ಗೃಹಜ್ಯೋತಿ ಗ್ಯಾರಂಟಿ ಯೋಜನೆ ಪರಿಶೀಲನೆ ಆರಂಭವಾಗಿದ್ದು, ಮೀಟರ್ ರೀಡರ್‌ಗಳು ಮನೆ-ಮನೆಗೆ ತೆರಳಿ, ಪರಿಶೀಲನೆ ನಡೆಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಜುಲೈ ತಿಂಗಳಲ್ಲಿ ಮೀಟರ್ ರೀಡಿಂಗ್ ಇರುವುದಿಲ್ಲ ಎಂದು ಬೆಸ್ಕಾಂ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದೆ.

ಮೀಟರ್ ರೀಡಿಂಗ್ ಬದಲಾಗಿ ಗ್ರಾಹಕರಿಗೆ ಜುಲೈ ತಿಂಗಳಲ್ಲಿ ಸರಾಸರಿ ಬಿಲ್ ನೀಡಲು ನಿರ್ಧರಿಸಿದೆ. ಈ ಹೊಸ ನಿಯಮವು ಹೆಚ್‌ಟಿ ಗ್ರಾಹಕರು ೪೦ಹೆಚ್‌ಪಿ ಅದಕ್ಕಿಂತ ಹೆಚ್ಚಿನ ಲೋಡ್ ಹೊಂದಿರುವ ಎಲ್‌ಟಿ ಗ್ರಾಹಕರು, ಸೋಲಾರ್ ಹೊಂದಿರುವ ಗ್ರಾಹಕರು ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕ ಹೊಂದಿರುವವರಿಗೆ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

---

ಕಲಬುರಗಿ ಜಿಲ್ಲೆಯ ಅಳಂದ ತಾಲೂಕಿನ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣ ಸೇರಿದಂತೆ ೫೨ ಕ್ರಿಮಿನಲ್ ಪ್ರಕರಣಗಳನ್ನು ಹಿಂತೆಗೆದುಕೊಳ್ಳುವ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ತಡೆ ನೀಡಿದೆ.

ಮೇ ೨೨ರಂದು ಸಚಿವ ಸಂಪುಟ ಪ್ರಕರಣಗಳನ್ನು ಹಿಂತೆಗೆತುಕೊಂಡಿತ್ತು. ಈ ನಿರ್ಧಾರವನ್ನು ಪ್ರಶ್ನಿಸಿ, ಗಿರೀಶ್ ಭಾರದ್ವಾಜ್ ಎಂಬುವವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ ಮಧ್ಯಂತರ ಆದೇಶ ಹೊರಡಿಸಿದೆ.

---

ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ನಿರ್ಮಿಸಲಿರುವ ಪ್ರಸ್ತಾವಿತ ಮೇಕೆದಾಟು ಅಣೆಕಟ್ಟು ಯೋಜನೆಯನ್ನು ತಮಿಳುನಾಡು ಕಾಂಗ್ರೆಸ್ ಸಮಿತಿ ವಿರೋಧಿಸಿದೆ.

ಈ ಯೋಜನೆಯ ವಿರುದ್ಧದ ಹೋರಾಟವನ್ನು ಮುಂದುವರಿಸಲು ನಿರ್ಧರಿಸಿದ್ದು, ಇದು ತಮಿಳುನಾಡಿನ ರೈತರ ಹಕ್ಕುಗಳಿಗೆ ಬೆದರಿಕೆ ಮತ್ತು ನ್ಯಾಯಾಂಗ ಆದೇಶಗಳ ಉಲ್ಲಂಘನೆ ಎಂದು ತಿಳಿಸಿದೆ.

ತಮಿಳುನಾಡಿನ ಒಪ್ಪಿಗೆಯಿಲ್ಲದೆ ಯೋಜನೆಗೆ ಒಂದೇ ಒಂದು ಇಟ್ಟಿಗೆಯನ್ನು ಇಡಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದೆ.

---

ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧದಲ್ಲಿನ ಸಚಿವಾಲಯದ ತಮ್ಮ ನೂತನ ಕಚೇರಿಯನ್ನು ಉದ್ಘಾಟಿಸಿದರು.

ಇದೇ ವೇಳೆ, ಸಾರ್ವಜನಿಕರ ಅಹವಾಲುಗಳು ಹಾಗೂ ಮನವಿ ಆಲಿಸಿದ ಸಚಿವರು, ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ವಿಷಯಗಳಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ನಿರಂತರ ಸಮನ್ವಯ ಸಾಧಿಸಿ, ಸಮಸ್ಯೆಗಳಿಗೆ ತ್ವರಿತ ಹಾಗೂ ಪರಿಣಾಮಕಾರಿ ಸ್ಪಂದನೆ ನೀಡುವ ಉದ್ದೇಶದಿಂದ ಸಚಿವಾಲಯದ ಕಚೇರಿ ಸದಾ ಎಲ್ಲರಿಗೂ ಮುಕ್ತವಾಗಿರಲಿದೆ ಎಂದು ತಿಳಿಸಿದರು.

---

ಸಂಕ್ಷಿಪ್ತ ಸುದ್ದಿ

೧. ಯಾದಗಿರಿ ಜಿಲ್ಲೆಯಾದ್ಯಂತ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಮೊದಲ ಎರಡು ದಿನಗಳಲ್ಲಿ ೨.೫೯ ಲಕ್ಷಕ್ಕೂ ಹೆಚ್ಚು ಗಣತಿ ನಮೂನೆಗಳನ್ನು ವಿತರಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಡಳಿತ ತಿಳಿಸಿದೆ.

__________ ಮುಕ್ತಾಯ __________